

## ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮದ (NPCBVI) ಪ್ರಕಾರ ಅಂಧತ್ವಕ್ಕೆ ಕಾರಣಗಳು

**66.2%**
ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆ

**18.6%**
Refractive Error
ದೃಷ್ಟಿದೋಷಗಳು

**6.7%**
ಗ್ಲೂಕೋಮಾ

**3.3%**
ಮಧುಮೇಹ ಸಂಬಂಧಿತ ರೆಟಿನೋಪತಿ

### ಅಗತ್ಯ ದಾಖಲೆ

ಆಧಾರ್ ಕಾರ್ಡ್, ಪಡಿತರ ಚೀಟಿ, ಮತದಾರರ ಗುರುತಿನ ಚೀಟಿ, ಪಾಸ್‌ಪೋರ್ಟ್ ಗಾತ್ರದ ಫೋಟೋ



### ಯೋಜನೆಯ ಮಾನದಂಡಗಳೇನು?

ಆಶಾಕಿರಣ ಯೋಜನೆಯ ಫಲಾನುಭವಿಗಳಾಗಲು ರಾಜ್ಯದ ಖಾಯಂ ನಿವಾಸಿಗಳಾಗಿರಬೇಕು. ಕಣ್ಣಿನ ದೃಷ್ಟಿದೋಷ ಅಥವಾ ಕಣ್ಣಿನ ಪೊರೆ ಸಮಸ್ಯೆಗಳಿಂದ ಬಳಲುತ್ತಿರಬೇಕು. ಆಧಾರ್ ಲಿಂಕ್ ಆಗಿರುವ ಮೊಬೈಲ್ ತರತಕ್ಕದ್ದು.

### ಹೀಗಿದೆ ಮರುವಿನ್ಯಾಸದ ಪ್ರಗತಿ!

- ಆಶಾಕಿರಣ ಯೋಜನೆಯ ಹೊಸ ಸ್ವರೂಪಕ್ಕೂ ಭರಪೂರ ಸ್ಪಂದನೆ.
- ಜಿಲ್ಲಾವಾರು ದೃಷ್ಟಿ ಕೇಂದ್ರಗಳಲ್ಲಿ ಕಣ್ಣಿನ ತಪಾಸಣೆ.
- ಈವರೆಗೆ 2,13,134 ಜನರಿಗೆ ಉಚಿತ ಕನ್ನಡಕಗಳನ್ನು ವಿತರಣೆ.
- ಸರ್ಕಾರಿ ಆಸ್ಪತ್ರೆ 36,387, ಸರ್ಕಾರೇತರ ಆಸ್ಪತ್ರೆ 2,23,369 ಸೇರಿ ಒಟ್ಟು 2,59,756 ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ.



ಎಲ್ಲ ಜಿಲ್ಲಾ ಆಸ್ಪತ್ರೆಗಳು, ತಾಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು ಸೇರಿದಂತೆ ವೈದ್ಯಕೀಯ ಕಾಲೇಜು ಆಸ್ಪತ್ರೆಗಳಲ್ಲಿ ಶಾಶ್ವತ ದೃಷ್ಟಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಸಾರ್ವಜನಿಕರು ಈ ಕೇಂದ್ರಗಳಿಗೆ ನೇರವಾಗಿ ಹೋಗಿ ದೃಷ್ಟಿ ತಪಾಸಣೆ ಮಾಡಿಸಿಕೊಳ್ಳಬಹುದಾಗಿರುತ್ತದೆ. ಆಶಾ ಕಾರ್ಯಕರ್ತೆಯರು ಹಾಗೂ ಸಮುದಾಯ ಆರೋಗ್ಯ ಅಧಿಕಾರಿ (CHO) ಅವರ ದಿನನಿತ್ಯದ ಚಟುವಟಿಕೆ ಅಡಿಯಲ್ಲಿ ಮನೆಮನೆಗೆ ಭೇಟಿ ನೀಡಿದಾಗ ಪ್ರಾಥಮಿಕ ದೃಷ್ಟಿ ತಪಾಸಣೆ ಮಾಡಬಹುದಾಗಿರುತ್ತದೆ. ಶಂಕಿತ ಪ್ರಕರಣಗಳು ಕಂಡುಬಂದಲ್ಲಿ ಹೆಚ್ಚಿನ ತಪಾಸಣೆಗೆ ಹತ್ತಿರದ ದೃಷ್ಟಿ ಕೇಂದ್ರಗಳಿಗೆ ಕಳುಹಿಸಿ ಅಗತ್ಯ ಚಿಕಿತ್ಸೆಗೆ ನೆರವಾಗಲಿದ್ದಾರೆ.

**-ಹರ್ಷಗುಪ್ತ,** ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

### ಏನಿದು ಆಶಾಕಿರಣ ಯೋಜನೆ?

ರಾಜ್ಯದಲ್ಲಿ ಕಣ್ಣಿನ ಸಮಸ್ಯೆಗಳಿಗೆ ಪರಿಹಾರ ನೀಡುವ ನಿಟ್ಟಿನಲ್ಲಿ ಸರ್ಕಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ 'ಆಶಾಕಿರಣ' ಯೋಜನೆಯನ್ನು ಕೈಗೆತ್ತಿಕೊಂಡಿದೆ. ಗ್ರಾಮೀಣ ಭಾಗದಲ್ಲಿ ಕಣ್ಣಿನ ಸಮಸ್ಯೆಗಳಿಂದಾಗಿ ಬಳಲುತ್ತಿರುವ ಜನರಿಗೆ ಅವರವರ ಮನೆಗಳ ಬಳಿಯೇ ಸರ್ಕಾರದಿಂದ ಉಚಿತ ಸೌಕರ್ಯಗಳನ್ನು ನೀಡುವ ಉದ್ದೇಶದಿಂದಾಗಿ ಈ ಯೋಜನೆಯನ್ನು ಆರಂಭಿಸಲಾಗಿದೆ. ಯೋಜನೆಯ ಅನ್ವಯ ಈಗಾಗಲೇ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಯೋಜನೆಗಳನ್ನು ಮನೆಗಳಿಗೆ ತಲುಪಿಸುವ ನಿಟ್ಟಿನಲ್ಲಿ ಮನೆಗಳಿಗೆ ಭೇಟಿ ನೀಡುತ್ತಿರುವ ಆಶಾ ಕಾರ್ಯಕರ್ತೆಯರು ಜನರ ಕಣ್ಣಿನ ಸಮಸ್ಯೆಗಳನ್ನು ಪತ್ತೆ ಹಚ್ಚಿ, ಅವರಿಗೆ ಆಶಾಕಿರಣ ಯೋಜನೆಯ ಕುರಿತು ಅರಿವು ಮೂಡಿಸುವ ಕಾರ್ಯ ಮಾಡುತ್ತಿದ್ದಾರೆ. ಜತೆಗೆ, ಜನರಿಗೆ ಈ ಯೋಜನೆಯ ಸದುಪಯೋಗಪಡಿಸಿಕೊಳ್ಳವಂತೆ ಪ್ರೇರೇಪಣೆಯನ್ನು ನೀಡುತ್ತಿದ್ದಾರೆ.

### 393 ಆಶಾಕಿರಣ ದೃಷ್ಟಿ ಕೇಂದ್ರ ಸ್ಥಾಪನೆ!

ರಾಜ್ಯಾದ್ಯಂತ ಕಣ್ಣಿನ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಕ್ರಾಂತಿಕಾರಕ ಹೆಜ್ಜೆಯಾಗಿ 'ಆಶಾಕಿರಣ' ಯೋಜನೆ ಜಾರಿಗೊಳಿಸಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಈ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡುವ ಉದ್ದೇಶದಿಂದ ರಾಜ್ಯಾದ್ಯಂತ ಒಟ್ಟು 393 ಆಶಾಕಿರಣ ದೃಷ್ಟಿ ಕೇಂದ್ರಗಳನ್ನು ಸ್ಥಾಪನೆ ಮಾಡಿದೆ. ಆಶಾಕಿರಣ ಯೋಜನೆಯ 3ನೇ ಹಂತವಾಗಿ ಈ ಕ್ರಮಕ್ಕೆ ಮುಂದಾಗಿದ್ದು, ಜಿಲ್ಲಾಸ್ಪತ್ರೆ, ತಾಲೂಕು ಆಸ್ಪತ್ರೆ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಆಶಾಕಿರಣ ದೃಷ್ಟಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಕಣ್ಣಿನ ಸಮಸ್ಯೆಗಳನ್ನು ಸ್ಥಳೀಯ ಮಟ್ಟದಲ್ಲೇ ಗುರುತಿಸಿ, ಪರಿಹಾರಗಳನ್ನು ಕಂಡುಕೊಳ್ಳಲು ಈ ಮಾರ್ಗ ಸಾಕಷ್ಟು ನೆರವಾಗುತ್ತಿದೆ. ಈ ದೃಷ್ಟಿ ಕೇಂದ್ರಗಳಲ್ಲಿ ನೇತ್ರ ತಪಾಸಣೆ, ಕನ್ನಡಕದ ಅಗತ್ಯತೆ ಪರಿಶೀಲನೆ, ಉಚಿತ ಕನ್ನಡಕ ವಿತರಣೆ, ಉಚಿತ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆಯೂ ಸಹ ಲಭ್ಯವಾಗುತ್ತಿದೆ. ಗ್ರಾಮಾಂತರ ಪ್ರದೇಶ ಸೇರಿ ನಗರಗಳಲ್ಲಿ ಮನೆಮನೆಗೆ ಭೇಟಿ ನೀಡುವ ಆಶಾಕಾರ್ಯಕರ್ತೆಯರು, ಸಮುದಾಯ ಆರೋಗ್ಯಾಧಿಕಾರಿಗಳು ಜನರ ಮನೆಗಳಿಗೆ ಭೇಟಿ ನೀಡಿದ ವೇಳೆ ಕಣ್ಣಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಗುರುತಿಸಬೇಕಾಗುತ್ತದೆ. ಈ ಸಂಬಂಧ ಶಂಕೆ ವ್ಯಕ್ತವಾದ ಜನರನ್ನು ಸಮೀಪದ ಆಶಾಕಿರಣ ದೃಷ್ಟಿ ಕೇಂದ್ರಗಳಿಗೆ ಭೇಟಿ ನೀಡುವಂತೆ ಪ್ರೇರೇಪಿಸಬೇಕಾಗುತ್ತದೆ. ಈ ಕಾರ್ಯದ ಬಳಿಕ ಸ್ಥಳೀಯ ಮಟ್ಟದಿಂದ ಅಗತ್ಯಕ್ಕೆ ತಕ್ಕಂತೆ ಪರಿಹಾರಗಳನ್ನು ಒದಗಿಸಲು ಸಿಬ್ಬಂದಿ ಶ್ರಮಿಸುತ್ತಿದ್ದಾರೆ. ಜಿಲ್ಲಾವಾರು ಭೌತಿಕ ವರದಿಗಳ ಪ್ರಕಾರ ಆಶಾಕಿರಣ ದೃಷ್ಟಿ ಕೇಂದ್ರಗಳಲ್ಲಿ ಡಿಸೆಂಬರ್ 25ರವರೆಗೆ 2,91,400 ಜನರಿಗೆ ಉಚಿತ ಕನ್ನಡಕ ನೀಡಲಾಗಿದ್ದು, 3,75,958 ಜನರನ್ನು ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆಗೆ ಒಳಪಡಿಸಲಾಗಿದೆ. ಈ ಪೈಕಿ ಸರ್ಕಾರಿ ಆಸ್ಪತ್ರೆಗಳಲ್ಲಿ 52,620 ಶಸ್ತ್ರಚಿಕಿತ್ಸೆ, 3,23,338 ಸರ್ಕಾರೇತರ ಆಸ್ಪತ್ರೆಗಳಲ್ಲಿ ಸೌಲಭ್ಯ ಜನರಿಗೆ ತಲುಪಿದೆ. ಬೆಂಗಳೂರಿನ ಬಿಬಿಎಂಪಿ ವ್ಯಾಪ್ತಿಯಲ್ಲೇ ಒಟ್ಟು 6 ದೃಷ್ಟಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ 5 ಕೇಂದ್ರಗಳು ಸಿಎಸ್‌ಆರ್ ನಿಧಿಯಡಿ ಕಾರ್ಯನಿರ್ವಹಿಸುತ್ತಿವೆ.